ಕಾರ್ಯಪಾಲಕ ಅಭಿಯಂತರರ ಕಛೇರಿ
ಲೋಇ, ಬೆಂಗಳೂರು ವಿಭಾಗ,
ಲೋಇ ಅನೆಕ್ಸ್ ಕಟ್ಟಡ 2ನೇ ಮಹಡಿ
ಕೆ.ಆರ್.ವೃತ್ತ ಬೆಂಗಳೂರು 01

ದೂರವಾಣಿ : 080-22133370
ಫ್ಯಾಕ್ಸ್: 080-22133365
ಇ ಮೇಲ್:eepwdbngdn@yahoo.com

ಕರ್ನಾಟಕ ಸರ್ಕಾರ
(ಲೋಕೋಪಯೋಗಿ ಇಲಾಖೆ)

ಸಂಖ್ಯೆ:ಕಾನಿಇಂ:ಬೆಂವಿ:ಎಇ-1:2022-23/6416 ದಿನಾಂಕ : 05/04/23

ರವರಿಗೆ "ನೋಂದಾಯಿತ ಅಂಚೆ ಮತ್ತು ಸ್ವೀಕೃತಿ"

**Secretary,**
**Mahan Anjanadri Vidya Kendra,**
No. 178/17, Tavarekere Main Road,
Bangalore South Taluk, Bangalore – 562130.

ಮಾನ್ಯರೇ,

ವಿಷಯ: ಬೆಂಗಳೂರು ದಕ್ಷಿಣ ತಾಲ್ಲೂಕು, ತಾವರೆಕೆರೆ ಹೋಬಳಿ, ತಾವರೆಕೆರೆ ಗ್ರಾಮದಲ್ಲಿರುವ **M/s Mahan Anjanadri Vidya Kendra, Shri Anjanadri Charitable Trust** ವತಿಯಿಂದ ನಡೆಯುತ್ತಿರುವ ಸ್ಕೂಲ್ ಕಟ್ಟಡಕ್ಕೆ ನಿರಾಕ್ಷೇಪಣಾ ಪತ್ರ ನೀಡುವ ಬಗ್ಗೆ.

ಉಲ್ಲೇಖ:
1. ದಿನಾಂಕ: 19.09.2020 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬೆಂಗಳೂರು ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ.
2. ಸರ್ಕಾರದ ಪತ್ರ ಸಂಖ್ಯೆ: ಲೋಇ 59 ಬಿಇಡಿ 2019 ದಿನಾಂಕ: 07.05.2022
3. ತಮ್ಮ ಮನವಿ ಪತ್ರ ದಿನಾಂಕ:01.08.2022
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ನಂ.1 ದಕ್ಷಿಣ ಉಪವಿಭಾಗ, ಬೆಂಗಳೂರು ರವರ ಪತ್ರ ಸಂಖ್ಯೆ: 2022-23/877 ದಿನಾಂಕ:25.01.2023

****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಬೆಂಗಳೂರು ದಕ್ಷಿಣ ತಾಲ್ಲೂಕು, ತಾವರೆಕೆರೆ ಹೋಬಳಿ, ತಾವರೆಕೆರೆ ಗ್ರಾಮದಲ್ಲಿರುವ **M/s Mahan Anjanadri Vidya Kendra, Shri Anjanadri Charitable Trust** ವತಿಯಿಂದ ನಡೆಯುತ್ತಿರುವ ಸ್ಕೂಲ್ ಕಟ್ಟಡಕ್ಕೆ ಸುರಕ್ಷತಾ ಪ್ರಮಾಣ ಪತ್ರವನ್ನು ಶಿಕ್ಷಣ ಇಲಾಖೆಗೆ ಒದಗಿಸಲು ಅಗತ್ಯವಿರುವುದಾಗಿ ತಿಳಿಸಿ ಕಟ್ಟಡದ ಸುರ್ಕ್ಷತಾ ಪ್ರಮಾಣ ಪತ್ರ ನೀಡಲು ಉಲ್ಲೇಖ (3) ರ ಪತ್ರದಲ್ಲಿ ಕೋರಿರುತ್ತೀರಿ.

ರಿಟ್ ಪಿಟೀಷನ್ (ಸಿವಿಲ್) ಸಂ: 484 (2004) ಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ನೀಡಲಾದ ಜಡ್ಜ್‌ಮೆಂಟ್‌ನಲ್ಲಿ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ ರವರು ಶಾಲಾ/ಕಾಲೇಜು ಕಟ್ಟಡಗಳನ್ನು ಪರಿಶೀಲಿಸಿ **"Structurally Stable Certificate"** ಅನ್ನು ನೀಡಲು ಆದೇಶಿಸಿರುವುದರಿಂದ ಹಾಗೂ ಉಲ್ಲೇಖ (1) ರ ಸಭಾ ನಡವಳಿಯ ನಿರ್ದೇಶನದಂತೆ ಈಗಾಗಲೇ ನಿರ್ಮಾಣಗೊಂಡು ಅಸ್ತಿತ್ವದಲ್ಲಿರುವಂತಹ ಕಟ್ಟಡಗಳಿಗೆ ರಚನಾತ್ಮಕ (Structural Evaluation) ಮೌಲ್ಯಮಾಪನ ಮಾಡಿಸಿ National Building code ಮಾನದಂಡಗಳ ಅನ್ವಯ ಪ್ರಮಾಣ ಪತ್ರ ನೀಡಲು ಸೂಚಿಸಿರುವುದರಿಂದ ಪ್ರಸ್ತಾಪಿತ ಕಟ್ಟಡದ ಸ್ಟ್ರಕ್ಚರಲ್ ಪರೀಕ್ಷೆಗಳನ್ನು ನಡೆಸಿ ಈ ಕೆಳಕಂಡಂತೆ ವರದಿ ನೀಡಲಾಗಿದೆ.

ಸದರಿ ಕಟ್ಟಡದ ನಕ್ಷೆಗೆ ಅಧ್ಯಕ್ಷಕರು, ತಾವರೆಕೆರೆ ಗ್ರಾಮ ಪಂಚಾಯಿತಿ, ತಾವರೆಕೆರೆ ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು ಬೆಂಗಳೂರು ರವರು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡವು ನೆಲಮಹಡಿ ಮತ್ತು ಮೂರು ಮೇಲ್ಮಹಡಿಗಳನ್ನು ಒಳಗೊಂಡಿದ್ದು, 2015 ನೇ ಸಾಲಿನಲ್ಲಿ ನಿರ್ಮಿಸಲಾಗಿರುತ್ತದೆ. ಸದರಿ ಕಟ್ಟಡಗಳಲ್ಲಿ ಶೌಚಾಲಯ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗಿರುತ್ತದೆ ಎಂದು ಸಹಾಯಕ ಕಾರ್ಯಪಾಲಕ ಅಭಿಯಂತರರು, ನಂ.1 ದಕ್ಷಿಣ ಉಪವಿಭಾಗ, ಬೆಂಗಳೂರು ರವರು ವರದಿಸಿರುತ್ತಾರೆ.

ಮುಂದುವರೆದು, ಕಟ್ಟಡದ ಸುರಕ್ಷತೆಗೆ ಸಂಬಂಧಿಸಿದಂತೆ, ಶಾಲಾ ಸಂಸ್ಥೆಯವರು ಕಟ್ಟಡದ ಕಾಂಕ್ರೀಟ್ ಸದೃಢತೆಯ ಬಗ್ಗೆ ದಿನಾಂಕ:08.11.2022 ರಂದು **Civil Quality Consultants & Engineers, Doddabasti Main Road, Bangalore-560056** ಮುಖಾಂತರ ಪರೀಕ್ಷೆಗಳನ್ನು ಕೈಗೊಂಡಿರುವ ಪರೀಕ್ಷಾ ವರದಿಯ ಪ್ರತಿಯನ್ನು ಸಹಾಯಕ ಕಾರ್ಯಪಾಲಕ ಅಭಿಯಂತರರು, ನಂ.1 ದಕ್ಷಿಣ ಉಪವಿಭಾಗ, ಬೆಂಗಳೂರು ರವರು ಸಲ್ಲಿಸಿರುತ್ತಾರೆ. ಸದರಿ ನಡೆಸಲಾದ ಪರೀಕ್ಷೆಯ ವರದಿಯಂತೆ ಕಟ್ಟಡವು ಸದೃಢತೆಯಿಂದ ಇರುವುದು ಕಂಡು ಬಂದಿರುತ್ತದೆ.

ಉಲ್ಲೇಖ (2) ರ ಸರ್ಕಾರದ ಪತ್ರದಲ್ಲಿ ಸೂಚಿಸಿರುವಂತೆ ಕಟ್ಟಡ ಸುರಕ್ಷಣೆ ಪ್ರಮಾಣ ಪತ್ರವನ್ನು ವಿತರಿಸಲು ಮೊತ್ತ ರೂ. 5,000/- (ರೂ. ಐದು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಬೆಂಗಳೂರು ದಕ್ಷಿಣ ತಾಲ್ಲೂಕು, ತಾವರೆಕೆರೆ ಹೋಬಳಿ, ತಾವರೆಕೆರೆ ಗ್ರಾಮದಲ್ಲಿರುವ **M/s Mahan Anjanadri Vidya Kendra, Shri Anjanadri Charitable Trust** ವತಿಯಿಂದ ನಡೆಯುತ್ತಿರುವ ಸ್ಕೂಲ್ ರವರು Bank of Baroda, ಡಿ.ಡಿ. 004150 ಸಂಖ್ಯೆ ದಿನಾಂಕ:14.02.2023 ರಲ್ಲಿ ಪಾವತಿಸಿರುತ್ತಾರೆ.

- **M/s Mahan Anjanadri Vidya Kendra, Shri Anjanadri Charitable Trust,** ಬೆಂಗಳೂರು ದಕ್ಷಿಣ ತಾಲ್ಲೂಕು, ತಾವರೆಕೆರೆ ಹೋಬಳಿ, ತಾವರೆಕೆರೆ ಗ್ರಾಮ, ಬೆಂಗಳೂರು ದಕ್ಷಿಣ ತಾಲ್ಲೂಕು ಇಲ್ಲಿ ನಿರ್ಮಿಸಲಾಗಿರುತ್ತದೆ ಎಂದು ಶಾಲೆ ಸಂಸ್ಥೆಯವರು ಮನವಿ ಪತ್ರದಲ್ಲಿ ವರದಿಸಿರುತ್ತಾರೆ.
- ಅಧ್ಯಕ್ಷಕರು, ತಾವರೆಕೆರೆ ಗ್ರಾಮ ಪಂಚಾಯಿತಿ, ತಾವರೆಕೆರೆ ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು ಬೆಂಗಳೂರು ರವರಿಂದ ಅನುಮೋದಿತ ನಕ್ಷೆಗನುಗುಣವಾಗಿ ಕಟ್ಟಡವನ್ನು ನಿರ್ಮಾಣ ಮಾಡಲಾಗಿರುತ್ತದೆ ಎಂದು ಸಹಾಯಕ ಕಾರ್ಯಪಾಲಕ ಅಭಿಯಂತರರು, ನಂ.1 ದಕ್ಷಿಣ ಉಪವಿಭಾಗ, ಬೆಂಗಳೂರು ರವರು ವರದಿಸಿರುತ್ತಾರೆ.

ಸದರಿ ಸಂಸ್ಥೆಯವರು ನೀಡಿರುವ ಎಲ್ಲಾ ದಾಖಲೆಗಳನ್ನು ಪರಿಶೀಲಿಸಲಾಗಿ, **Civil Quality Consultants & Engineers, Doddabasti Main Road, Bangalore-560056** ರವರು ಕಟ್ಟಡವು ರಚನಾತ್ಮಕವಾಗಿ ಸುರಕ್ಷಿತವಾಗಿದೆಯೆಂದು ನೀಡಿರುವ ಪರೀಕ್ಷಾ ವರದಿಯನ್ನು ಪರಿಗಣಿಸಿ ಹಾಗೂ ಲೋಕೋಪಯೋಗಿ ಇಲಾಖೆಯ ತಾಂತ್ರಿಕ ತಂಡ ನೀಡಿರುವ ವರದಿಯನ್ವಯ ಬೆಂಗಳೂರು ದಕ್ಷಿಣ ತಾಲ್ಲೂಕು, ತಾವರೆಕೆರೆ ಹೋಬಳಿ, ತಾವರೆಕೆರೆ ಗ್ರಾಮದಲ್ಲಿರುವ **M/s Mahan Anjanadri Vidya Kendra, Shri Anjanadri Charitable Trust** ವತಿಯಿಂದ ನಡೆಯುತ್ತಿರುವ ಸ್ಕೂಲ್ ಕಟ್ಟಡಗಳು ಪ್ರಸಕ್ತ ಶೈಕ್ಷಣಿಕ ಸಾಲಿಗೆ **Structurally Stable** ಇದೆ ಎಂದು ನಿರಾಕ್ಷೇಪಣಾ ಪತ್ರವನ್ನು ನೀಡಲಾಗಿದೆ.

ಉಳಿದಂತೆ, ಪ್ರಸ್ತಾಪಿತ ಕಟ್ಟಡದ Non - Structural Elements (Infrastructural facilities) ಗೆ ಸಂಬಂಧಿಸಿದಂತೆ, ಸಿವಿಲ್ ಇಂಜಿನಿಯರ್, ಆರೋಗ್ಯಾಧಿಕಾರಿ, ಕಂದಾಯ ಅಧಿಕಾರಿ, ಮನಶ್ಶಾಸ್ತ್ರಜ್ಞ, ಅಗ್ನಿಶಾಮಕ ಅಧಿಕಾರಿ, ಸ್ಥಳೀಯ ಸಂಸ್ಥೆಯ ಅಧಿಕಾರಿಗಳನೊಳಗೊಂಡ ಪರೀಕ್ಷಾ ತಂಡದವತಿಯಿಂದ ಪರಿಶೀಲಿಸಿ ನಿರಾಕ್ಷೇಪಣಾ ಪತ್ರವನ್ನು ಪಡೆಯತಕ್ಕದ್ದು ಹಾಗೂ "Fire safety Certificate" ಅನ್ನು ಮುಖ್ಯ ಅಗ್ನಿಶಾಮಕ ಅಧಿಕಾರಿಯಿಂದ ಪಡೆಯತಕ್ಕದ್ದು.

ತಮ್ಮ ವಿಶ್ವಾಸಿ,

ಕಾರ್ಯಪಾಲಕ ಅಭಿಯಂತರರು,
ಲೋಇ., ಬೆಂಗಳೂರು ವಿಭಾಗ,
ಬೆಂಗಳೂರು.